ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ರಾಜ್ಯದಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಸೇವಾ ಭದ್ರತೆ ನೀಡುವ ಕುರಿತು

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-

1425 (1770) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಸೇವಾಭದ್ರತೆ ನೀಡುವ ಬಗ್ಗೆ ಕಾನೂನು ಹಾಗೂ ನಿಯಮಾವಳಿಗಳನ್ನು 2005 ರಿಂದ ಅನುಷ್ಠಾನಗೊಳ್ಳುತ್ತಿರುವುದು ನಿಜವೇ ;

(ಆ) ಸರ್ಕಾರ ರೂಪಿಸಿದ ಕಾನೂನು ಹಾಗೂ ನಿಯಮಗಳನ್ನು ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳು ಕಟ್ಟು ನಿಟ್ಟಾಗಿ ಜಾರಿಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅನುದಾನ ರಹಿತ ಆಡಳಿತ ಮಂಡಳಿಗಳ ವಿರುದ್ಧ ಕಾನೂನಿನನ್ವಯ ಕೈಗೊಂಡ ಕ್ರಮಗಳೇನು ;

(ಈ) 6ನೇ ವೇತನ ಆಯೋಗದ ಶಿಫಾರಸ್ಸುಗಳನ್ವಯ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳು ತನ್ನ ಸಿಬ್ಬಂದಿಗೆ ಮೂಲವೇತನದ ಸರಿಸಮ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, 6ನೇ ವೇತನ ಆಯೋಗ ಶಿಫಾರಸ್ಸುಗಳನ್ವಯ ಮೂಲವೇತನ ಪಾವತಿಸುವ ಬಗ್ಗೆ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನಗಳನ್ನು ಸರ್ಕಾರ ಹೊರಡಿಸಿದೆಯೇ;

(ಊ) ಸರ್ಕಾರವು 6ನೇ ವೇತನ ಆಯೋಗದ ಶಿಫಾರಸ್ಸಿನಂತೆ ಮೂಲವೇತನ ನೀಡದಿರುವ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?